ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ಪ್ರಾಥಮಿಕ ಆರೋಗ್ಯ ಕೇಂದ್ರಗಳು

310 (550) ಶ್ರೀ ವೆಂಕಟಸ್ವಾಮಿ (ದೇವನಹಳ್ಳಿ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ಸಮುದಾಯ ಆಸ್ಪತ್ರೆಗಳ ಸಂಖ್ಯೆ ಎಷ್ಟು; (ಮಾಹಿತಿ ನೀಡುವುದು)

(ಆ) ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ (ಪ್ರಾಥಮಿಕ ಆರೋಗ್ಯ ಕೇಂದ್ರ ತಾಲ್ಲೂಕು ಆಸ್ಪತ್ರೆ ಸಮುದಾಯ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯಾಧಿಕಾರಿಗಳು, "ಡಿ" ಗ್ರೂಪ್ ನೌಕರರು ಮತ್ತು ಇತರೆ ಹುದ್ದೆಗಳ ಸಂಖ್ಯೆ ಎಷ್ಟು; (ಆಸ್ಪತ್ರೆವಾರು ವಿವರ ನೀಡುವುದು)

(ಇ) ಕೊರತೆ ಇರುವ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿ ನೇಮಕಾತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

ಶ್ರೀ ಅರವಿಂದ ಲಿಂಬಾವಳಿ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

(ಅ) ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ 10 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ವಿಜಯಪುರದಲ್ಲಿ ಒಂದು ಸಮುದಾಯ ಆರೋಗ್ಯ ಕೇಂದ್ರ ಕಾರ್ಯನಿರ್ವಹಿಸುತ್ತಿವೆ. ಪ್ರಾಥಮಿಕ ಆರೋಗ್ಯ ಕೇಂದ್ರಗಳ ವಿವರಗಳು ಕೆಳಕಂಡಂತಿವೆ:

ಕ್ರ.ಸಂ.	ಹೆಸರು	ಕ್ರ.ಸಂ.	ಹೆಸರು
1	ನಲ್ಲೂರು	6.	ಕೊಹಿರಾ
2	ಕುಂದಾಣ	7	ಬೂದಿಗೆರೆ
3	ಹರದೇಶನಹಳ್ಳಿ	8	ಜೆ.ಎಮ್. ಹಳ್ಳಿ
4	ಚನ್ನರಾಯಪಟ್ಟಣ	9	ವಿಶ್ವನಾಥಪುರ
5	ಅವತಿ	10	ಸಾದಹಳ್ಳಿ

(ಆ) ದೇವನಹಳ್ಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿರುವ 10 ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ, 10 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳು ಮಂಜೂರಾಗಿದ್ದು, ಎಲ್ಲಾ 10 ಹುದ್ದೆಗಳು ಭರ್ತಿಯಾಗಿವೆ. ಮುಂದುವರೆದು, ಸದರಿ ಕೇಂದ್ರಗಳಿಗೆ ಒಟ್ಟು 25 ಗ್ರೂಪ್ "ಡಿ" ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ 15 ಹುದ್ದೆಗಳು ಭರ್ತಿಯಾಗಿವೆ ಹಾಗೂ 10 ಹುದ್ದೆಗಳು ಖಾಲಿ ಇವೆ, ಅಲ್ಲದೆ, ಇವುಗಳಿಗೆ ಒಟ್ಟು 98 ವಿವಿಧ ವೃಂದಗಳ ಅರೆ ವೈದ್ಯಕೀಯ ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ 74 ಹುದ್ದೆಗಳು ಭರ್ತಿಯಾಗಿವೆ ಮತ್ತು 24 ಹುದ್ದೆಗಳು ಖಾಲಿ ಇವೆ.

ದೇವನಹಳ್ಳಿ ಸಾರ್ವಜನಿಕ ಆಸ್ಪತ್ರೆಯಲ್ಲಿ 01 ಹಿರಿಯ ವೈದ್ಯಾಧಿಕಾರಿ, 03 ತಜ್ಞ ವೈದ್ಯರು ಹಾಗೂ 01 ದಂತ ವೈದ್ಯಾಧಿಕಾರಿಯ ಹುದ್ದೆಗಳು ಮಂಜೂರಾಗಿದ್ದು, ಈ ಎಲ್ಲಾ ಹುದ್ದೆಗಳು ಭರ್ತಿಯಾಗಿವೆ. ಸದರಿ ಆಸ್ಪತ್ರೆಗೆ 32 ಗ್ರೂಪ್ 'ಡಿ' ಹುದ್ದೆಗಳು ಮಂಜೂರಾಗಿದ್ದು, ಆಪೈಕಿ 3 ಹುದ್ದೆಗಳು ಭರ್ತಿಯಾಗಿವೆ ಮತ್ತು 29 ಹುದ್ದೆಗಳು ಖಾಲಿ ಇವೆ. ಮುಂದುವರೆದು, ಈ ಆಸ್ಪತ್ರೆಗೆ ಇತರೆ ವೃಂದದ 40 ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ 20 ಹುದ್ದೆಗಳು ಭರ್ತಿಯಾಗಿವೆ ಹಾಗೂ 20 ಹುದ್ದೆಗಳು ಖಾಲಿ ಇವೆ.

ದೇವನಹಳ್ಳಿ ತಾಲ್ಲೂಕಿನ ವಿಜಯಪುರ ಸಮುದಾಯ ಆರೋಗ್ಯ ಕೇಂದ್ರದಲ್ಲಿ 03 ತಜ್ಞ ವೈದ್ಯರು, 01 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ ಹಾಗೂ 01 ದಂತ ವೈದ್ಯರ ಹುದ್ದೆ ಮಂಜೂರಾಗಿವೆ ಈ ಪೈಕಿ, 01 ತಜ್ಞ ವೈದ್ಯರ ಹುದ್ದೆ ಹೊರತುಪಡಿಸಿ, ಉಳಿದ ಹುದ್ದೆಗಳು ಭರ್ತಿಯಾಗಿವೆ. ಸದರಿ ಕೇಂದ್ರಕ್ಕೆ 12 ಗ್ರೂಪ್ 'ಡಿ' ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ 03 ಹುದ್ದೆಗಳು ಭರ್ತಿಯಾಗಿವೆ. ಹಾಗೂ 09 ಹುದ್ದೆಗಳು ಖಾಲಿ ಇವೆ. ಮುಂದುವರೆದು, ಈ ಕೇಂದ್ರಕ್ಕೆ 19 ಇತರೆ ವೃಂದದ ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ 13 ಹುದ್ದೆಗಳು ಭರ್ತಿಯಾಗಿವೆ ಮತ್ತು 06 ಹುದ್ದೆಗಳು ಖಾಲಿ ಇವೆ.

ಆಸ್ಪತ್ರೆವಾರು ವಿವರಗಳನ್ನು ಅನುಬಂಧ–1ರಲ್ಲಿ ನೀಡಲಾಗಿದೆ.

(ಇ) ತಾಲ್ಲೂಕು ಆಸ್ಪತ್ರೆ ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿನ ಸ್ವಚ್ಛತಾ ಕಾರ್ಯ ನಿರ್ವಹಿಸುವ ಸಲುವಾಗಿ ಹೊರ ಗುತ್ತಿಗೆ ಮೂಲಕ ನಾನ್– ಕ್ಲಿನಿಕಲ್ ಸೇವೆಯನ್ನು ಪಡೆದು ನಿರ್ವಹಿಸಲು ಕ್ರಮ ವಹಿಸಲಾಗಿದೆ. ಉಳಿದಂತೆ, ಇಲಾಖೆಯ ಆಸ್ಪತ್ರೆಗಳು/ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯರು ಮತ್ತು ಇತರೆ ಸಿಬ್ಬಂದಿ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮದ ವಿವರಗಳನ್ನು ಅನುಬಂಧ–2ರಲ್ಲಿ ನೀಡಲಾಗಿದೆ.

ಅನುಬಂಧ–1

ದೇವನಹಳ್ಳಿ ಸಾರ್ವಜನಿಕ ಆಸ್ಪತ್ರೆ ವೈದ್ಯರು/ಸಿಬ್ಬಂದಿ ವರ್ಗದವರ ವಿವರಗಳು

(ಪ್ರಶ್ನೆ ಸಂಖ್ಯೆ:–550)

ಕ್ರಮ ಸಂಖ್ಯೆ	ಹುದ್ದೆ	ಮಂಜೂರು	ಕಾರ್ಯನಿರತ	ಖಾಲಿ
1	ಮುಖ್ಯ ವೈದ್ಯಾಧಿಕಾರಿಗಳು	1	1	0
2	ತಜ್ಞ ವೈದ್ಯರು	3	3	0
3	ದಂತ ವೈದ್ಯಾಧಿಕಾರಿ	1	1	0
4	ಸಹಾಯಕ ಆಡಳಿತಾಧಿಕಾರಿಗಳು	1	1	0
5	ಕಛೇರಿ ಅಧೀಕ್ಷಕರು	1	1	0
6	ಶುಶ್ರೂಷಕ ಅಧೀಕ್ಷಕರು ದರ್ಜೆ 2	1	1	0
7	ಶುಶ್ರೂಷಕರು	20	4	16
8	ಹಿರಿಯ ಪ್ರಯೋಗಶಾಲಾ ತಂತ್ರಜ್ಞರು	1	0	1
9	ಕಿರಿಯ ಪ್ರಯೋಗಶಾಲಾ ತಂತ್ರಜ್ಞರು	1	1	0
10	ಕ್ಷ ಕಿರಣ ತಂತ್ರಜ್ಞರು	2	2	0
11	ಹಿರಿಯ ಫಾರ್ಮಸಿಸ್ಟ್	1	1	0
12	ಕಿರಿಯ ಫಾರ್ಮಸಿಸ್ಟ್	2	2	0
13	ನೇತ್ರ ಸಹಾಯಕರು	1	1	0
14	ಪ್ರ.ದ.ಸ.	1	1	0
15	ದ್ವಿ.ದ.ಸ	2	2	0
16	ಕಿ.ಮ.ಆ.ಸ.	3	3	0
17	ಕಿ.ಪು.ಆ.ಸ.	0	0	0
18	ವಾಹನ ಚಾಲಕರು	2	0	2
19	ಅಡುಗೆಯವರು	1	0	1
20	ಗ್ರೂಪ್ 'ಡಿ'	32	3	29
	ಒಟ್ಟು	77	28	49

ವಿಜಯಪುರ ಸಮುದಾಯ ಆರೋಗ್ಯ ಕೇಂದ್ರದ ವೈದ್ಯರು/ಸಿಬ್ಬಂದಿ ವರ್ಗದವರ ವಿವರಗಳು

(ಪ್ರಶ್ನೆ ಸಂಖ್ಯೆ:–550)

ಕ್ರಮ ಸಂಖ್ಯೆ	ಹುದ್ದೆ	ಮಂಜೂರು	ಕಾರ್ಯನಿರತ	ಖಾಲಿ
1	ತಜ್ಞ ವೈದ್ಯರು	3	2	1
2	ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು	1	1	0
3	ದಂತ ವೈದ್ಯಾಧಿಕಾರಿ	1	1	0
4	ಸಹಾಯಕ ಆಡಳಿತಾಧಿಕಾರಿಗಳು	0	0	0
5	ಕಛೇರಿ ಅಧೀಕ್ಷಕರು	1	1	0
6	ಶುಶ್ರೂಷಕ ಅಧೀಕ್ಷಕರು ದರ್ಜೆ 2	–	–	–
7.	ಶುಶ್ರೂಷಕರು	6	3	3
8	ಹಿರಿಯ ಪ್ರಯೋಗಶಾಲಾ ತಂತ್ರಜ್ಞರು	–	–	–
9	ಕಿರಿಯ ಪ್ರಯೋಗಶಾಲಾ ತಂತ್ರಜ್ಞರು	1	1	0
10	ಕ್ಷ–ಕಿರಣ ತಂತ್ರಜ್ಞರು	1	0	1
11	ಹಿರಿಯ ಫಾರ್ಮಸಿಸ್ಟ್			
12	ಕಿರಿಯ ಫಾರ್ಮಸಿಸ್ಟ್	2	2	0
13	ನೇತ್ರ ಸಹಾಯಕರು	1	1	0
14	ಪ್ರ.ದ.ಸ.	1	1	0
15	ದ್ವಿ.ದ.ಸ	2	1	1
16	ಕಿ.ಮ.ಆ.ಸ	3	3	0
17	ಕಿ.ಪು.ಆ.ಸ			
18	ವಾಹನ ಚಾಲಕರು	1	0	1
19	ಅಡುಗೆಯವರು			
20	ಗ್ರೂಪ್ 'ಡಿ'	12	3	9
	ಒಟ್ಟು	**36**	**20**	**16**

ಅನುಬಂಧ–2

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿಯಿರುವ ತಜ್ಞ ವೈದ್ಯರ, ವೈದ್ಯರ ಮತ್ತು ಇತರೇ ಸಿಬ್ಬಂದಿ ಹುದ್ದೆಗಳನ್ನು ತುಂಬಲು ತೆಗೆದುಕೊಂಡ ಕ್ರಮಗಳ ವಿವರಗಳು:

1 ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ (ಎನ್.ಆರ್.ಹೆಚ್.ಎಂ.) ದ ಅಡಿಯಲ್ಲಿ ಸ್ತ್ರೀರೋಗ ತಜ್ಞತೆ, ಅರವಳಿಕೆ ಹಾಗೂ ಮಕ್ಕಳ ತಜ್ಞತೆಯಲ್ಲಿ ಗೌರವಧನ ಆಧಾರದ ಮೇಲೆ ತಜ್ಞ ವೈದ್ಯರನ್ನು ನೇಮಿಸಿಕೊಳ್ಳಲು ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ `70,000 ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ `50,000 ದಂತೆ ನೀಡಲು ಅವಕಾಶ ಕಲ್ಪಿಸಲಾಗಿದೆ.

2 ಕೆ.ಹೆಚ್.ಎಸ್.ಡಿ.ಆರ್.ಪಿ ಯೋಜನೆಯಡಿಯಲ್ಲಿ ಇತರೆ ತಜ್ಞತೆಗಳಿಗೆ (ಮಕ್ಕಳ ತಜ್ಞರು, ಸ್ತ್ರೀರೋಗ ತಜ್ಞರು ಹಾಗೂ ಅರವಳಿಕೆ ತಜ್ಞರನ್ನು ಹೊರತುಪಡಿಸಿ) ಸಂಬಂಧಪಟ್ಟಂತೆ, ಮೇಲೆ ತಿಳಿಸಿದ ಜಿಲ್ಲೆಗಳಲ್ಲಿ ಕ್ರಮವಾಗಿ ಮಾಸಿಕ ` 65,000 ಹಾಗೂ `50,000 ದಂತೆ ಗೌರವಧನ ನೀಡಲಾಗುತ್ತಿದೆ. ಮುಂದುವರೆದು, ರೀ ಟೈನರ್‌ಷಿಪ್ ಆಧಾರದಲ್ಲಿ ನೇಮಕ ಮಾಡುವ ಎಲ್ಲಾ ತಜ್ಞ ವೈದ್ಯರಿಗೆ ಸಂಬಂಧಿಸಿದಂತೆ ನೀಡಲಾಗುತ್ತಿದ್ದ ಗೌರವ ಧನವನ್ನು ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ `5,000 ದಿಂದ `10,000 ಕ್ಕೆ ಹೆಚ್ಚಿಸಿ ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ `8,000 ದಂತೆ ನೀಡಿ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಮುಂದುವರೆದು, ಸದರಿ ತಜ್ಞರು ಹೊರ ರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ ದಿನವೊಂದಕ್ಕೆ `1,000 ದಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ.

3. ಮೇಲೆ ತಿಳಿಸಿದಂತೆ ಎನ್.ಆರ್.ಹೆಚ್.ಎಂ. / ಕೆ.ಹೆಚ್.ಎಸ್.ಡಿ.ಆರ್.ಪಿ. ಅಡಿಯಲ್ಲಿ ಅವಕಾಶಗಳನ್ನು ಕಲ್ಪಿಸಿದ್ದಾಗ್ಯೂ, ಎನ್.ಆರ್.ಹೆಚ್.ಎಂ. ಅಡಿಯಲ್ಲಿ ಕೇವಲ 125 ಹಾಗೂ ಕೆ.ಹೆಚ್.ಎಸ್.ಆರ್.ಡಿ. ಪಿ. ಅಡಿಯಲ್ಲಿ ಕೇವಲ 49 ವಿವಿಧ ತಜ್ಞತೆ ಹೊಂದಿರುವ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಒಟ್ಟಾರೆ, ಸರ್ಕಾರಿ ಆಸ್ಪತ್ರೆ / ಕೇಂದ್ರಗಳಲ್ಲಿ ತಜ್ಞ ವೈದ್ಯರು ಕರ್ತವ್ಯ ನಿರ್ವಹಿಸಲು ಮುಂದೆ ಬರುತ್ತಿರುವವರ ಸಂಖ್ಯೆ ಉತ್ತೇಜನಕಾರಿಯಗಿಲ್ಲ.

4. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರ ಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು, ಈ ಮೂಲಕ ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.

5. ಕರ್ನಾಟಕ ಲೋಕಸೇವಾ ಆಯೋಗದ ಮೂಲಕ 600 ತಜ್ಞರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಇತ್ತೀಚೆಗೆ ಕ್ರಮ ಕೈಗೊಳ್ಳಲಾಗಿ ಒಟ್ಟು 252 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು. ಆಯ್ಕೆಯಾದ ಎಲ್ಲಾ 252 ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿ ಮಾಡಲು ಕ್ರಮ ಕೈಗೊಳ್ಳಲಾಗಿ, ಕೇವಲ 137 ಅಭ್ಯರ್ಥಿಗಳು ಸ್ಥಳ ಆಯ್ಕೆ ಮಾಡಿಕೊಂಡರು. ಆ ಪೈಕಿ ಕೇವಲ 75 ಅಭ್ಯರ್ಥಿಗಳು ಮಾತ್ರ ಕಾರ್ಯವರದಿ ಮಾಡಿಕೊಂಡಿದ್ದಾರೆ.

6. ಎಂ.ಬಿ.ಬಿ.ಎಸ್. ವಿದ್ಯಾರ್ಹತೆಯ ಸಾಮಾನ್ಯ ವೈದ್ಯಾಧಿಕಾರಿಗಳ ಒಟ್ಟು 2586 ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ 2390 ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ (ಇತ್ತೀಚೆಗೆ ಗುತ್ತಿಗೆ ಆಧಾರದ ಮೇಲೆ ನೇಮಕಗೊಂಡು ವೈದ್ಯರು ಸೇರಿದಂತೆ) ಹಗೂ 196 ಹುದ್ದೆಗಳು ಖಾಲಿಯಿವೆ ದಿನಾಂಕ27/6/2012 ಒಟ್ಟು 155 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲು ಜಿಲ್ಲಾಧಿಕಾರಿಗಳಿಗೆ ಸರ್ಕಾರವು ಅನುಮತಿ ನೀಡಿದೆ.

7. ಪ್ರಸ್ತುತ 735 ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರ ಹಾಗೂ 314 ಕಿರಿಯ ಆರೋಗ್ಯ ಪುರುಷ ಸಹಾಯಕರ ಹುದ್ದೆಗಳನ್ನು ವಿಶೇಷ ನೇಮಕಾತಿ ಸಮಿತಿ ಮೂಲಕ ಭರ್ತಿ ಮಾಡಲು ಅರ್ಜಿಗಳನ್ನು ಆಹ್ವಾನಿಸಿದ್ದು, ಆಯ್ಕೆ ಪ್ರಕ್ರಿಯೆಯು ಜಾರಿಯಲ್ಲಿದೆ.

8. ಕರ್ನಾಟಕ ಲೋಕಸೇವಾ ಆಯೋಗದಿಂದ ಪ್ರಸ್ತುತ 224 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿ, ಆಯ್ಕೆಯಾದ 224 ಅಭ್ಯರ್ಥಿಗಳ ಪೈಕಿ ಇತ್ತೀಚೆಗೆ 210 ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲಾಗಿದೆ.

9. ಇಲಾಖೆಯಲ್ಲಿ ಒಟ್ಟು 13965 ಗ್ರೂಪ್-ಡಿ ನೌಕರರ ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ 4067 ಹುದ್ದೆಗಳು ಖಾಲಿಯಿವೆ. ಸದರಿ ಖಾಲಿ ಹುದ್ದೆಗಳ ಪೈಕಿ 2323 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಕ್ರಿಯೆಯು ಜಾರಿಯಲ್ಲಿದೆ.